**ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರ್ಗಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 357/2022**

**ಚಾ.ಸಾ - 19**

**ಪ್ರಾ.ಸಾ - 11**

**ಸಾಕ್ಷಿಗೆ ದಿನಾಂಕ 16-07-2026ರಂದು ಪ್ರಮಾಣ ವಚನ ಬೋಧಿಸಲಾಯಿತು**

| | | |
|---|---|---|
| ಸಾಕ್ಷಿಯ ಹೆಸರು | ಃ | ಸಿದ್ದರಾಮ |
| ಗಂಡನ ಹೆಸರು | ಃ | ಬಸಣ್ಣ |
| ವಯಸ್ಸು | ಃ | 51 ವರ್ಷ |
| ಉದ್ಯೋಗ | ಃ | ಆರಕ್ಷಕ ಉಪ-ನಿರೀಕ್ಷಕ, ನರೋಣಾ ಪೊಲೀಸ್ ಠಾಣೆ |
| ವಾಸಸ್ಥಳ | ಃ | ನರೋಣಾ ತಾಃ ಆಳಂದ |

**<u>ಮುಖ್ಯವಿಚಾರಣೆಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ:</u>**

ನಾನು 2021 ರಿಂದ 2024 ರವರೆಗೆ ಜೇವರ್ಗಿ ಪೋಲಿಸ ಠಾಣೆಯಲ್ಲಿ ಸಹಾಯಕ ಆರಕ್ಷಕ ಉಪ-ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 21-12-2021ರಂದು ನಾನು SHO ಕರ್ತವ್ಯದಲ್ಲಿದ್ದಾಗ ಚಾಸಾ-1ರವರು ಮಧ್ಯಾಹ್ನ 1 ಗಂಟೆಗೆ ಹಾಜರಾಗಿ ಬೆರಳಚ್ಚು ಮಾಡಿದಂತಹ ದೂರನ್ನು ನೀಡಿರುತ್ತಾರೆ. ಅದರ ಆಧಾರದ ಮೇಲೆ ಪ್ರಕರಣವನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿ ದಾಖಲಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ಅದೇ ದಿನ ಮಧ್ಯಾಹ್ನ 2-15 ರಿಂದ 3-15 ವರೆಗೆ ಜೇವರ್ಗಿ ಸರಕಾರಿ ಆಸ್ಪತ್ರೆಯಲ್ಲಿ ಮೃತ ಚಂದ್ರಗೌಡರವರ ಶವಪಂಚನಾಮೆಯನ್ನು ಪಂಚರಾದ ಚಾಸಾ-2 ಮತ್ತು 3 ರವರ ಸಮಕ್ಷಮ ಮಾಡಿರುತ್ತೇನೆ. ಚಾಸಾ-8ರವರ ಹೇಳಿಕೆ ಪಡೆದುಕೊಂಡಿರುತ್ತೇನೆ.

ಮುಂದಿನ ತನಿಖೆಗಾಗಿ ಪ್ರಕರಣದ ಕಡತವನ್ನು ಚಾಸಾ-20 ರವರಿಗೆ ವಹಿಸಿಕೊಟ್ಟಿರುತ್ತೇನೆ.

ಸಾಕ್ಷಿಗೆ ನಿಪಿ-1 ದೂರನ್ನು ತೋರಿಸಲಾಗಿ ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ನಿಪಿ-18 ಶವಪಂಚನಾಮೆಯನ್ನು ತೋರಿಸಲಾಗಿ ಅದರ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿ ಸಹಿಯನ್ನು ನಿಪಿ-18(ಎ) ಎಂದು ಗುರುತಿಸಲಾಯಿತು.

ಸಾಕ್ಷಿ ಪ್ರಥಮ ವರ್ತಮಾನ ವರದಿಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪ್ರಥಮ ವರ್ತಮಾನ ವರದಿಯನ್ನು ನಿಪಿ-38 ಎಂದು ಸಹಿಯನ್ನು ನಿಪಿ-38(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಬಿ.ಆರ್.ಎಂ. ವಕೀಲರಿಂದ**

ನೀವು ಸುಳ್ಳು ಪ್ರಕರಣ ದಾಖಲಿಸಿಕೊಂಡಿದ್ದೀರಿ ಎಂದರೆ ಸರಿಯಲ್ಲ. ಮೃತರ ಕುಟುಂಬಸ್ಥರಿಗೆ ಪರಿಹಾರ ಹಣ ಕೊಡಿಸುವ ಉದ್ದೇದಿಂದ ಚಾಸಾ-1ರವರ ಮತನ್ನು ಕೇಳಿ ಸುಳ್ಳು ಪ್ರಕರಣ ದಾಖಲಿಸಿಕೊಂಡಿದ್ದೀರಿ ಎಂದರೆ ಸರಿಯಲ್ಲ. ಮೃತರ ಕುಟುಂಬಕ್ಕೆ ಸಹಾಯವಾಗುವ ರೀತಿಯಲ್ಲಿ ಸುಳ್ಳು ಶವಪಂಚನಾಮೆ ಮಾಡಿದ್ದೀರಿ ಎಂದರೆ ಸರಿಯಲ್ಲ. ಆರೋಪಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲದಿದ್ದರೂ ಸಹ ಸುಳ್ಳು ಪ್ರಕರಣ ದಾಖಲಿಸಿಕೊಂಡು ಸುಳ್ಳು ಸಾಕ್ಷಿ ನುಡಿಯುತಿದ್ದೀರಿ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ ಅದೆ.

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 357/2022**

**ಚಾ.ಸಾ - 6**
**ಪ್ರಾ.ಸಾ - 12**

**ಸಾಕ್ಷಿಗೆ ದಿನಾಂಕ 16-07-2026ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಸಂತೋಷ |
| ತಂದೆಯ ಹೆಸರು | ಃ | ಮಹಾಂತಪ್ಪ |
| ವಯಸ್ಸು | ಃ | 40 ವರ್ಷ |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ಇಜೇರಿ ತಾಃ ಯಡ್ರಾಮಿ |

**<u>ಮುಖ್ಯವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ</u>**

ನ್ಯಾಯಾಲಯದ ಮುಂದಿರುವ ಆರೋಪಿ ನನಗೆ ಗೊತ್ತಿಲ್ಲ. ಚಾಸಾ-1 ಗೊತ್ತಿಲ್ಲ. ಚಾಸಾ-7 ಗೊತ್ತು.

3 ವರ್ಷಗಳ ಹಿಂದೆ ಜೇವರ್ಗಿ ಪೊಲೀಸ್ ಠಾಣೆಗೆ ಹೋದಾಗ ಫೋಟೊ ತೆಗೆದುಕೊಂಡು ನನ್ನ ಸಹಿ ಪಡೆದಿರುತ್ತಾರೆ. ನನ್ನ ಸಮಕ್ಷಮ ಯಾವುದೇ ಕಾರನ್ನು ಜಪ್ತಿಪಡಿಸಿಕೊಂಡಿಲ್ಲ ಜಪ್ತಿ ಪಂಚನಾಮೆ ಮಾಡಿಲ್ಲ.

ಸಾಕ್ಷಿಗೆ ನಿಪಿ-36 ಜಪ್ತಿ ಪಂಚನಾಮೆ ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಾಕ್ಷಿ ಸಹಿಯನ್ನು ನಿಪಿ-36(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ನಿಪಿ-37 ಫೋಟೊವನ್ನು ತೋರಿಸಲಾಗಿ ಅದರಲ್ಲಿ ತಾನು ಇರುವುದಾಗಿ ನೋಡಿ ಒಪ್ಪಿಕೊಂಡಿರುತ್ತಾರೆ. ಸದರಿ ಫೋಟೊ ಯಾಕೆ ತೆಗೆದಿರುತ್ತಾರೆ ಎಂದು ಗೊತ್ತಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**<u>ಪಾಟೀ ಸವಾಲುಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ದಿಃ 24-12-2021ರಂದು ಮಧ್ಯಾಹ್ನ 12 ರಿಂದ 12-30 ಗಂಟೆವರೆಗೆ ಜೇವರ್ಗಿ ಪೊಲೀಸ್ ಠಾಣಾ

ಆವರಣದಲ್ಲಿ ಪೊಲೀಸರು ನಿಮ್ಮ ಮತ್ತು ಚಾಸಾ-5ರವರ ಸಮಕ್ಷಮ ನಿಪಿ-36 ರಂತೆ ಪಂಚನಾಮೆ ಮಾಡಿ, ಕಾರ್ ನಂ.ಕೆಎ-04 ಎಂ.ಕ್ಯೂ-0557ನೇದ್ದನ್ನು ಅಪಘಾತವಾದ ವಿಚಾರವಾಗಿ ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಪಂಚನಾಮೆ ಮಾಡುವ ಸಮಯದಲ್ಲಿ ನಿಪಿ-37 ಪೋಟೊವನ್ನು ತೆಗೆದಿರುತ್ತಾರೆ ಎಂದರೆ ಗೊತ್ತಿಲ್ಲ.

ನಿಮಗೆ ಈ ಪ್ರಕರಣದ ಎಲ್ಲ ವಿಚಾರಗಳು ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ವಕೀಲರ ಪರವಾಗಿ ಸಾಕ್ಷಿಯ ಪಾಟೀ ಸವಾಲು ಇರುವುದಿಲ್ಲ.**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ